# ಕರ್ನಾಟಕ ವಿಧಾನ ಪರಿಷತ್ತು

## ನೂರ ಐವತ್ತಮೂರನೆಯ ಅಧಿವೇಶನ

## ಪೂರಕ ಕಾರ್ಯಕಲಾಪಗಳ ಪಟ್ಟಿ

## ಗುರುವಾರ, ದಿನಾಂಕ: 25ನೇ ಜುಲೈ, 2024

* * *

**ಕ್ರಮ ಸಂಖ್ಯೆ: 1ರ ನಂತರ ಈ ಕೆಳಕಂಡ ಬಾಬ್ತನ್ನು ಸೇರಿಸಿಕೊಳ್ಳತಕ್ಕದ್ದು**

**ಸಭೆಯ ಮುಂದಿಡಲಾಗುವ ಕಾಗದ ಪತ್ರಗಳು**

**ಕಾರ್ಯದರ್ಶಿಯವರು:**
**ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ ಈ ಕೆಳಕಂಡ ವಿಧೇಯಕಗಳನ್ನು ಸಭೆಯ ಮುಂದಿಡುವುದು**

04. ಕರ್ನಾಟಕ ಸರಕು ಮತ್ತು ಸೇವೆಗಳ ತೆರಿಗೆ(ತಿದ್ದುಪಡಿ) ವಿಧೇಯಕ, 2024
05. ಕರ್ನಾಟಕ ನೀರಾವರಿ (ತಿದ್ದುಪಡಿ) ವಿಧೇಯಕ, 2024
06. ಕರ್ನಾಟಕ ಮುನಿಸಿಪಾಲಿಟಿಗಳ ಮತ್ತು ಕೆಲವು ಇತರ ಕಾನೂನು (ತಿದ್ದುಪಡಿ) ವಿಧೇಯಕ, 2024

**ಕ್ರಮ ಸಂಖ್ಯೆ: 2ರ ನಂತರ ಈ ಕೆಳಕಂಡ ಬಾಬ್ತನ್ನು ಸೇರಿಸಿಕೊಳ್ಳತಕ್ಕದ್ದು**

**ಶಾಸನ ರಚನೆ**

**ವಿಧೇಯಕವನ್ನು ಪರ್ಯಾಲೋಚಿಸುವುದು ಹಾಗೂ ಅಂಗೀಕರಿಸುವುದು**

04. ಕರ್ನಾಟಕ ಸರಕು ಮತ್ತು ಸೇವೆಗಳ ತೆರಿಗೆ(ತಿದ್ದುಪಡಿ) ವಿಧೇಯಕ, 2024
**ಶ್ರೀ ಸಿದ್ದರಾಮಯ್ಯ (ಮಾನ್ಯ ಮುಖ್ಯಮಂತ್ರಿಯವರು)**

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2024ನೇ ಸಾಲಿನ "ಕರ್ನಾಟಕ ಸರಕು ಮತ್ತು ಸೇವೆಗಳ ತೆರಿಗೆ(ತಿದ್ದುಪಡಿ) ವಿಧೇಯಕ"ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

05. ಕರ್ನಾಟಕ ನೀರಾವರಿ (ತಿದ್ದುಪಡಿ) ವಿಧೇಯಕ, 2024
**ಶ್ರೀ ಡಿ.ಕೆ. ಶಿವಕುಮಾರ್ (ಮಾನ್ಯ ಉಪ ಮುಖ್ಯಮಂತ್ರಿಗಳು)**

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2024ನೇ ಸಾಲಿನ "ಕರ್ನಾಟಕ ನೀರಾವರಿ (ತಿದ್ದುಪಡಿ) ವಿಧೇಯಕ, 2024"ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

06. ಕರ್ನಾಟಕ ಮುನಿಸಿಪಾಲಿಟಿಗಳ ಮತ್ತು ಕೆಲವು ಇತರ ಕಾನೂನು (ತಿದ್ದುಪಡಿ) ವಿಧೇಯಕ, 2024

**ಶ್ರೀ ಬಿ.ಎಸ್. ಸುರೇಶ (ಮಾನ್ಯ ನಗರಾಭಿವೃದ್ಧಿ ಮತ್ತು ನಗರ ಯೋಜನೆ ಸಚಿವರು)**

ಅ) ವಿಧಾನ ಸಭೆಯಿಂದ ಅಂಗೀಕೃತ ರೂಪದಲ್ಲಿರುವ 2024ನೇ ಸಾಲಿನ "ಕರ್ನಾಟಕ ಮುನಿಸಿಪಾಲಿಟಿಗಳ ಮತ್ತು ಕೆಲವು ಇತರ ಕಾನೂನು (ತಿದ್ದುಪಡಿ) ವಿಧೇಯಕ"ವನ್ನು ಪರ್ಯಾಲೋಚಿಸಬೇಕೆಂದು ಸೂಚಿಸುವುದು;

ಆ) ಹಾಗೂ ವಿಧೇಯಕವನ್ನು ಅಂಗೀಕರಿಸಬೇಕೆಂದು ಸೂಚಿಸುವುದು.

**ಕ್ರಮ ಸಂಖ್ಯೆ: 5ರ ನಂತರ ಈ ಕೆಳಕಂಡ ಬಾಬ್ತನ್ನು ಸೇರಿಸಿಕೊಳ್ಳತಕ್ಕದ್ದು**

## ನಿರ್ಣಯಗಳು

**ಶ್ರೀ ಸಿದ್ದರಾಮಯ್ಯ (ಮಾನ್ಯ ಮುಖ್ಯಮಂತ್ರಿಗಳು) ಈ ಕೆಳಕಂಡ ನಿರ್ಣಯವನ್ನು ಮಂಡಿಸುವುದು:-**

ಇ. "ನೀಟ್ (NEET) ಪರೀಕ್ಷಾ ವ್ಯವಸ್ಥೆಯು, ಗ್ರಾಮೀಣ ಬಡ ಮಕ್ಕಳ ವೈದ್ಯಕೀಯ ಶಿಕ್ಷಣಾವಕಾಶಗಳ ಮೇಲೆ ತೀವ್ರ ಪರಿಣಾಮ ಬೀರುತ್ತಿದ್ದು ಹಾಗೂ ಶಾಲಾ ಶಿಕ್ಷಣ ವ್ಯವಸ್ಥೆಯನ್ನು ನಿರರ್ಥಕಗೊಳಿಸುವುದು ಮಾತ್ರವಲ್ಲದೆ, ರಾಜ್ಯ ಸರ್ಕಾರದ ವೈದ್ಯಕೀಯ ಕಾಲೇಜುಗಳಲ್ಲಿ ವಿದ್ಯಾರ್ಥಿಗಳಿಗೆ ಪ್ರವೇಶ ನೀಡುವ ರಾಜ್ಯ ಸರ್ಕಾರದ ಹಕ್ಕುಗಳನ್ನು ಕಸಿದುಕೊಳ್ಳುತ್ತಿದ್ದು, ಅದನ್ನು ರದ್ದುಪಡಿಸಬೇಕೆಂದು ಕೋರಲಾಗಿದೆ.

ಈ ಪರೀಕ್ಷೆಯಿಂದ ಕರ್ನಾಟಕಕ್ಕೆ ವಿನಾಯಿತಿ ನೀಡಬೇಕೆಂದು ಹಾಗೂ ಶಾಲಾ ಶಿಕ್ಷಣದಲ್ಲಿ ವಿದ್ಯಾರ್ಥಿಗಳಿಗೆ ರಾಜ್ಯ ಸರ್ಕಾರವು ನಡೆಸುವ ಸಾಮಾನ್ಯ ಪ್ರವೇಶ ಪರೀಕ್ಷೆಯ(ಸಿಇಟಿ) ಅಂಕಗಳನ್ನಾಧರಿಸಿ ವೈದ್ಯಕೀಯ ಕಾಲೇಜುಗಳಿಗೆ ಪ್ರವೇಶಾತಿ ನೀಡಬೇಕೆಂದು ಮತ್ತು ನೀಟ್ ಪರೀಕ್ಷೆಗಳಲ್ಲಿ ಆಗುತ್ತಿರುವ ಪುನರಾವರ್ತಿತ ಅಕ್ರಮಗಳನ್ನು ಪರಿಗಣಿಸಿ ರಾಷ್ಟ್ರೀಯ ಮಟ್ಟದಲ್ಲಿ ನೀಟ್ ವ್ಯವಸ್ಥೆಯನ್ನು ರದ್ದುಪಡಿಸುವ, ಹಾಗೆ ಕೇಂದ್ರ ಸರ್ಕಾರವು ರಾಷ್ಟ್ರೀಯ ವೈದ್ಯಕೀಯ ಆಯೋಗ ಅಧಿನಿಯಮ, 2019 (2019ರ ಕೇಂದ್ರ ಅಧಿನಿಯಮ 30)ರಲ್ಲಿ ಅಗತ್ಯ ತಿದ್ದುಪಡಿಗಳನ್ನೂ ಸಹ ಮಾಡುವಂತೆ ಕೇಂದ್ರ ಸರ್ಕಾರವನ್ನು ಈ ಸದನವು ಒತ್ತಾಯಿಸುತ್ತದೆ."

**ಶ್ರೀ ಈಶ್ವರ್ ಖಂಡ್ರೆ (ಮಾನ್ಯ ಅರಣ್ಯ, ಜೀವಿಶಾಸ್ತ್ರ ಮತ್ತು ಪರಿಸರ ಸಚಿವರು) ಅವರು ಈ ಕೆಳಕಂಡ ನಿರ್ಣಯವನ್ನು ಮಂಡಿಸುವುದು:-**

ಈ. "ಅರಣ್ಯ ವಾಸಿ ಅನುಸೂಚಿತ ಬುಡಕಟ್ಟುಗಳಿಗೆ ಸಮಾನವಾಗಿ ಇತರ ಪಾರಂಪರಿಕ ಅರಣ್ಯ ವಾಸಿಗಳನ್ನು ಪರಿಗಣಿಸುವ ಹಾಗೆ, ಅನುಸೂಚಿತ ಬುಡಕಟ್ಟುಗಳ ಮತ್ತು ಇತರೆ ಪಾರಂಪರಿಕ ಅರಣ್ಯ ವಾಸಿಗಳ (ಅರಣ್ಯ ಹಕ್ಕುಗಳ ಮಾನ್ಯತೆ) ಅಧಿನಿಯಮ, 2006 (2007ರ ಕೇಂದ್ರ ಅಧಿನಿಯಮ 02) ಮತ್ತು ಅದರಡಿಯಲ್ಲಿ ಮಾಡಲಾದ ನಿಯಮಗಳನ್ನು ಸೂಕ್ತವಾಗಿ ಮತ್ತು ಸಮರ್ಪಕವಾಗಿ ಮಾರ್ಪಡಿಸುವಂತೆ ಕೇಂದ್ರ ಸರ್ಕಾರವನ್ನು ಈ ಸದನವು ಒತ್ತಾಯಿಸುತ್ತದೆ."

**ಕೆ.ಆರ್. ಮಹಾಲಕ್ಷ್ಮಿ**
**ಕಾರ್ಯದರ್ಶಿ**

---

**ಪ್ರತಿ ದಿನದ ವಿಧಾನ ಪರಿಷತ್ತಿನ ಕಾರ್ಯಕಲಾಪಗಳ ಪಟ್ಟಿಯನ್ನು ವೆಬ್‌ಸೈಟ್‌ನಲ್ಲಿಯೂ ಸಹ ಪಡೆದುಕೊಳ್ಳಬಹುದು.**

**www.kla.kar.nic.in/council/council.htm**